# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2146 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18.03.2022 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ನೆಲೆಸಿರುವ ಹಿಂದುಳಿದ ಸಮುದಾಯಕ್ಕೆ ಸೇರಿದ ಈಡಿಗ/ಬಿಲ್ಲವ ಜನಾಂಗದ 27 ಉಪ ಪಂಗಡಗಳು ಆರ್ಥಿಕವಾಗಿ ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಸಮಾಜದ ಮುಖ್ಯ ವಾಹಿನಿಯಿಂದ ದೂರ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರಲ್ಲಿ ಹಿಂದುಳಿದ ವರ್ಗಗಳನ್ನು ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಎಂದು ವರ್ಗೀಕರಿಸಲಾಗಿದೆ. ಸದರಿ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-2ಎ ರಡಿಯಲ್ಲಿ ಈಡಿಗ/ಬಿಲ್ಲವ ಜನಾಂಗಗಳನ್ನೊಳಗೊಂಡಂತೆ ಒಟ್ಟು 26 ಜಾತಿಗಳು ಕ್ರಮಸಂಖ್ಯೆ:4 ರಡಿಯಲ್ಲಿ ಸೇರ್ಪಡೆಗೊಂಡಿರುತ್ತವೆ. ಪ್ರವರ್ಗ-2ಎ ಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಶೇಕಡ 15 ರ ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿರುತ್ತದೆ. |
| ಆ) | ಈ ಸಮಾಜದ ಎಲ್ಲಾ ಹಂತಗಳಲ್ಲಿ ಸಶಕ್ತಗೊಳಿಸಲು ಸರ್ಕಾರ ಕ್ರಿಯಾ ಯೋಜನೆಯನ್ನು ರೂಪಿಸಿದೆಯೇ; | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಪ್ರವರ್ಗ-2ಎ ನಲ್ಲಿ ಬರುವ ಈಡಿಗ/ಬಿಲ್ಲವ ಜನಾಂಗದ 27 ಉಪ ಪಂಗಡಗಳು ಸೇರಿದಂತೆ ಪ್ರವರ್ಗ-1,2ಎ,3ಎ,3ಬಿಗೆ ಸೇರಿದ ಹಿಂದುಳಿದ ವರ್ಗಗಳ ಆರ್ಥಿಕಾಭಿವೃದ್ಧಿಗಾಗಿ ಅರಿವು ಶೈಕ್ಷಣಿಕ ಸಾಲ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆಗಳ ಮೂಲಕ ಆರ್ಥಿಕ ಸ್ವಾವಲಂಬಿಗಳಾಗಲು ಕ್ರಿಯಾ ಯೋಜನೆಗಳನ್ನು ರೂಪಿಸಲಾಗಿದೆ. ಅದರಂತೆ, ಈಡಿಗ/ಬಿಲ್ಲವ ಜನಾಂಗಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ರೂಪಿಸಿದ್ದಲ್ಲಿ, ಈ ಜನಾಂಗದ ಸರ್ವತೋಮುಖ ಅಭಿವೃದ್ಧಿಗಾಗಿ ಇತರೆ ಜಾತಿ/ಜನಾಂಗದ ಅಭಿವೃದ್ಧಿಗಾಗಿ ಸ್ಥಾಪಿಸಿರುವ ನಿಯಮಗಳಂತೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೇ? | |

ಸಂಖ್ಯೆ: ಹಿಂವಕ 66 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು